ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಯಶವಂತಪುರ ರೈಲ್ವೆ ನಿಲ್ದಾಣ ತಲುಪುವ ಮಾರ್ಗಗಳ ಅವ್ಯವಸ್ಥೆ ಬಗ್ಗೆ

ಶ್ರೀ ಕೆ. ಗೋವಿಂದ ರಾಜ್(ವಿಧಾನಸಭೆಯಿಂದ ಚುನಾಯಿತರಾದವರು) –

383 (358) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದ ಯಶವಂತಪುರ ರೈಲ್ವೆ ನಿಲ್ದಾಣಕ್ಕೆ ಬರುವ ಮತ್ತು ಇಲ್ಲಿಂದ ಪ್ರಯಾಣಿಸುವ ಪ್ರಯಾಣೀಕರ ಅಂದಾಜು ಸರ್ಕಾರಕ್ಕಿದೆಯೇ; (ವಿವರ ಒದಗಿಸುವುದು)

(ಆ) ಯಶವಂತಪುರ ರೈಲ್ವೆ ನಿಲ್ದಾಣ ತಲುಪಲು ಮತ್ತು ನಿಲ್ದಾಣದಿಂದ ನಗರದ ಇತರೆಡೆಗೆ ಸಾಗಲು ಇರುವ ಮಾರ್ಗಗಳು ಕಿರಿದಾಗಿದ್ದು, ಬೀದಿ ಬದಿ ವ್ಯಾಪಾರಿಗಳು, ಅಂಗಡಿಗಳು, ರಸ್ತೆಯನ್ನು ಆಕ್ರಮಿಸಿಕೊಂಡಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಸುಗಮ ವಾಹನ ಸಂಚಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು;

(ಇ) ಯಶವಂತಪುರ ರೈಲ್ವೆ ನಿಲ್ದಾಣವನ್ನು ಮೇಲ್ದರ್ಜೆಗೇರಿಸಲು ಮತ್ತು ರಸ್ತೆಗಳ ಅಭಿವೃದ್ಧಿಗಾಗಿ ಈಗಾಗಲೇ ಕೇಂದ್ರ ಸರ್ಕಾರ ಅನುದಾನ ಒದಗಿಸಿರುವುದು ನಿಜವೇ; ಹಾಗಿದ್ದಲ್ಲಿ, ಈ ಅಭಿವೃದ್ಧಿ ಕುರಿತು ಆಗಿರುವ ಪ್ರಗತಿ ಏನು; (ವಿವರ ಒದಗಿಸುವುದು)

(ಈ) ಯಶವಂತಪುರ ರೈಲ್ವೆ ನಿಲ್ದಾಣ ತಲುಪಲು ಇರುವ ನ್ಯೂನತೆ ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ವಿಶೇಷ ಯೋಜನೆ ರೂಪಿಸಿದೆಯೇ; ಹಾಗಿದ್ದಲ್ಲಿ, ವಿವರ ಒದಗಿಸುವುದು?